




ದಿನಾಂಕ 28-10-2024 ರಂದು ವಿಧಾನಸೌಧದ ಮೊದಲ ಮಹಡಿಯಲ್ಲಿ ನಡೆದ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಿಯಮಗಳನ್ನು ಕೂಲಂಕುಶವಾಗಿ ಪರಿಶೀಲಿಸಿ, ತಿದ್ದುಪಡಿ ತರಲು ರಚಿಸಲಾಗಿರುವ ವಿಧಾನ ಪರಿಷತ್ತಿನ ನಿಯಮಾವಳಿಗಳ ಸಮಿತಿಯ ಪ್ರಾರಂಭಿಕ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಶತಮಾನದ ಇತಿಹಾಸ ಹೊಂದಿರುವ ಕರ್ನಾಟಕ ವಿಧಾನ ಪರಿಷತ್ತು ತನ್ನದೇ ಆದ ಘನತೆ ಗೌರವವನ್ನು ಹೊಂದಿದೆ ಇದನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಕೆಲ ನಿಯಮಾವಳಿಗಳನ್ನು ಆಡಳಿತಾತ್ಮಕ ಸುಧಾರಣೆಯ ದೃಷ್ಟಿಯಿಂದ ತಿದ್ದುಪಡಿ ತರುವುದು ಇಂದು ಅವಶ್ಯಕವಾಗಿದೆ. ಅದಕ್ಕಾಗಿ ಸಮಿತಿಯನ್ನು ಕೂಲಂಕುಶವಾಗಿ ಪರಿಶೀಲಿಸಿ ಒಟ್ಟಾಭಿಪ್ರಾಯವನ್ನು ಸಂಗ್ರಹಿಸಲಾಗುವುದು ಎಂದು ಹೇಳಿದರು.